**Akashvani : Bangalore**
**Regional Bulletin In Kannada**
**12.09.2025 / 6.40 pm/8 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

<u>ಮುಖ್ಯಾಂಶಗಳು</u>

೧. ಡಿಸೆಂಬರ್ ಅಂತ್ಯದವೇಳೆಗೆ ಸಮಗ್ರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ವರದಿ ನಿರೀಕ್ಷೆ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಹೇಮಾವತಿ ಸಂಪರ್ಕ ಕಾಲುವೆ ಯೋಜನೆ ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧ

೩. ಹೊಸ ಜವಳಿ ನೀತಿ; ಜವಳಿ-ಸಿದ್ಧ ಉಡುಪು ಕ್ಷೇತ್ರದಲ್ಲಿ ೨ ಲಕ್ಷ ಉದ್ಯೋಗ ಸೃಷ್ಟಿಗೆ ಪೂರಕ - ಸಚಿವ ಶಿವಾನಂದ ಪಾಟೀಲ್

೪. ಬುಡಕಟ್ಟು ಗ್ರಾಮಗಳಲ್ಲಿ ಸುರಕ್ಷಿತ ಹೆರಿಗೆಗಾಗಿ, ಜನನಕ್ಕೆ ಕಾಯುವ ಮನೆ, ಕಾರ್ಯಕ್ರಮ; ಉತ್ತರ ಕನ್ನಡ - ಚಾಮರಾಜನಗರದಲ್ಲಿ ಪ್ರಾಯೋಗಿಕ ಜಾರಿ

><><><><><><><

ಇದೇ ೨೨ ರಿಂದ ಅಕ್ಟೋಬರ್ ೭ರ ವರೆಗೆ ನಡೆಯಲಿರುವ ಸಮಗ್ರ ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಕರ್ನಾಟಕದ ಎಲ್ಲಾ ನಾಗರಿಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಮನವಿ ಮಾಡಿದ್ದಾರೆ. ಈ ಸಮೀಕ್ಷೆಯು ರಾಜ್ಯದ ೨ ಕೋಟಿ ಮನೆಗಳಲ್ಲಿ ಸುಮಾರು ೭ ಕೋಟಿ ಜನರ ಸಂಪೂರ್ಣ ಜನಸಂಖ್ಯೆಯನ್ನು ಒಳಗೊಳ್ಳುವ ಗುರಿಯನ್ನು ಹೊಂದಿದೆ. ಇದು ಪ್ರತಿ ಕುಟುಂಬದ ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಮತ್ತು ಆರ್ಥಿಕ ಸ್ಥಿತಿಯ ಬಗ್ಗೆ ವಿವರವಾದ ಮಾಹಿತಿಯನ್ನು ಸಂಗ್ರಹಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ ( 29 ಸೆಕೆಂಡುಗಳು)**

ಮಧುಸೂದನ್ ನಾಯಕ್ ಅಧ್ಯಕ್ಷತೆಯ ಆಯೋಗಕ್ಕೆ ಈ ಕಾರ್ಯವನ್ನು ವೈಜ್ಞಾನಿಕವಾಗಿ ನಡೆಸಲು ಸೂಚಿಸಲಾಗಿದೆ, ಯಾರನ್ನೂ ಬಿಡಲಾಗುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲಾಗಿದೆ. ಡಿಸೆಂಬರ್ ೨೦೨೫ರ ವೇಳೆಗೆ ಅಂತಿಮ ವರದಿಯನ್ನು ನಿರೀಕ್ಷಿಸಲಾಗಿದೆ ಎಂದು ಅವರು ಹೇಳಿದರು. ಈ ಸಮೀಕ್ಷೆಯು ನಿಖರತೆ ಮತ್ತು ಸಮಗ್ರತೆಯನ್ನು ಖಚಿತಪಡಿಸಿಕೊಳ್ಳಲು ಹಲವಾರು ತಾಂತ್ರಿಕ ಕ್ರಮಗಳನ್ನು ಬಳಸುತ್ತದೆ. ಪ್ರತಿಯೊಂದು ಮನೆಗೂ ಅದರ ವಿದ್ಯುತ್ ಮೀಟರ್ ಸಂಖ್ಯೆಯನ್ನು ಬಳಸಿಕೊಂಡು ಜಿಯೋ-ಟ್ಯಾಗ್ ಮಾಡಲಾಗುತ್ತದೆ ಮತ್ತು ೧ ಲಕ್ಷ ೫೫ ಸಾವಿರ ಮನೆಗಳಿಗೆ ಈ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ. ವಿದ್ಯುತ್ ಸಂಪರ್ಕವಿಲ್ಲದ ಮನೆಗಳನ್ನು ಸಹ ಸಂಪೂರ್ಣವಾಗಿ ಸಮೀಕ್ಷೆ ಮಾಡಲಾಗುತ್ತದೆ ಮತ್ತು ಯಾರೂ ಹೊರಗಿಡಲ್ಪಡುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲಾಗುತ್ತದೆ. ದತ್ತಾಂಶ ಸಂಗ್ರಹ ಪ್ರಕ್ರಿಯೆಯಲ್ಲಿ, ಪಡಿತರ ಚೀಟಿಗಳು ಮತ್ತು ಆಧಾರ್ ವಿವರಗಳನ್ನು ಮೊಬೈಲ್ ಸಂಖ್ಯೆಗಳಿಗೆ ಲಿಂಕ್ ಮಾಡಲಾಗುತ್ತದೆ. ಸಮೀಕ್ಷೆಯು ೬೦ ಪ್ರಶ್ನೆಗಳನ್ನು ಒಳಗೊಂಡಿರುವ ವಿವರವಾದ ಪ್ರಶ್ನಾವಳಿಯನ್ನು ಒಳಗೊಂಡಿರುತ್ತದೆ ಎಂದು ಅವರು ಹೇಳಿದರು. ನಾಗರಿಕರು ಆನ್‌ಲೈನ್‌ನಲ್ಲಿಯೂ ಸಹ ಭಾಗವಹಿಸುವ ಅವಕಾಶವಿದ್ದು, ಎಲ್ಲರಿಗೂ ನ್ಯಾಯಯುತ ಮತ್ತು ಸಮಾನ ಅವಕಾಶವನ್ನು ಖಚಿತಪಡಿಸುವ ನೀತಿಗಳನ್ನು ರೂಪಿಸಲು ಸರ್ಕಾರಕ್ಕೆ ಪ್ರತಿ ಮನೆಯಿಂದ ನಿಖರವಾದ ಮಾಹಿತಿ ಅತ್ಯಗತ್ಯ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

><><><><><><><

ಹೇಮಾವತಿ ಸಂಪರ್ಕ ಕಾಲುವೆ ಯೋಜನೆ ಕಾಮಗಾರಿ ಸ್ಥಳ ಪರಿಶೀಲನೆ ಮಾಡಿದ್ದು, ಅಧಿಕಾರಿಗಳ ಜೊತೆ ಚರ್ಚೆ ಮಾಡಿ ಯಾರಿಗೂ ಅನ್ಯಾಯವಾಗದಂತೆ ನೋಡಿಕೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ ನೀಡಿದ್ದಾರೆ. ತುಮಕೂರಿನ ಸುಂಕಾಪುರ ಬಳಿ ನಡೆಯುತ್ತಿರುವ ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ಪರಿವೀಕ್ಷಣೆ ನಂತರ ಜಲಸಂಪನ್ಮೂಲ ಸಚಿವರೂ ಆಗಿರುವ ಶಿವಕುಮಾರ್ ಸುದ್ದಿಗಾರರೊಂದಿಗೆ ಮಾತನಾಡಿ, ಈ ವಿಚಾರದಲ್ಲಿ ರೈತರು ಗಾಬರಿಯಾಗುವುದು ಬೇಡ.  ಅಧಿಕಾರಿಗಳ ಜೊತೆ ಚರ್ಚೆ ಮಾಡಿ, ತುಮಕೂರು ಜಿಲ್ಲೆಯ ರೈತರ ರಕ್ಷಣೆ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು. “ಕೇಂದ್ರ ಸಚಿವರಾದ ಸೋಮಣ್ಣ ಹಾಗೂ ಶಾಸಕರ ಸಲಹೆ ಮೇರೆಗೆ ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ಸ್ಥಳ

ಪರಿಶೀಲನೆ ಮಾಡುತ್ತಿದ್ದು, ತುಮಕೂರಿನ ಎಲ್ಲಾ ಕ್ಷೇತ್ರಗಳ ಅಭಿವೃದ್ಧಿ ನಮ್ಮ ಜವಾಬ್ದಾರಿ. ತುಮಕೂರಿನ ಜನರು ಪ್ರತಿ ಸಂದರ್ಭದಲ್ಲಿಯೂ ಸಂಯಮದಿಂದ ಸಹಕಾರ ನೀಡಿದ್ದಾರೆ ಎಂದರು.

**ಧ್ವನಿ : ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ( 19 ಸೆಕೆಂಡುಗಳು)**

ಈ ಹಿಂದೆ ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿದ್ದಾಗ, ಈ ಯೋಜನೆ ಪ್ರಾರಂಭಿಸಲಾಯಿತು. ನಂತರ ಬಿಜೆಪಿ ಸರ್ಕಾರ ಈ ಯೋಜನೆ ನಿಲ್ಲಿಸಿತ್ತು. ಪರಿಣಾಮ ೬೦೦ ಕೋಟಿಯಿದ್ದ ಯೋಜನಾ ವೆಚ್ಚ ಇಂದು ಒಂದು ಸಾವಿರ ಕೋಟಿಗೆ ಏರಿಕೆಯಾಗಿದೆ. ಈಗಾಗಲೇ ಕೆಲಸ ಆರಂಭವಾಗಿದ್ದು, ಪೈಪ್‌ಗಳ ಖರೀದಿ ಹಾಗೂ ಕೆಲಸ ಆರಂಭಿಸಿ ೪೦೦ ಕೋಟಿ ಹಣ ಬಿಡುಗಡೆ ಮಾಡಲಾಗಿದೆ. ನಾಲ್ಕೈದು ತಿಂಗಳಲ್ಲಿ ಮುಗಿಯುವ ಕೆಲಸ" ಎಂದು ಹೇಳಿದರು.

><><><><><><><

ಜವಳಿ ಹಾಗೂ ಸಿದ್ಧ ಉಡುಪು ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳ ಆಕರ್ಷಣೆ ಮತ್ತು ಸುಮಾರು ೨ ಲಕ್ಷ ಉದ್ಯೋಗ ಸೃಷ್ಟಿಗೆ ಪೂರಕವಾಗಿ ಜವಳಿ ನೀತಿ ೨೦೨೫-೩೦ ನೀತಿ ರೂಪಿಸಲಾಗುವುದು ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ನೂತನ ಜವಳಿ ನೀತಿ ರಚನೆಗೆ ಸಲಹೆ ಪಡೆಯಲು ವಿಧಾನಸೌಧದಲ್ಲಿ ಶುಕ್ರವಾರ ಕರೆದಿದ್ದ ಜನಪ್ರತಿನಿಧಿಗಳು, ಜವಳಿ ಉದ್ಯಮಿಗಳ ಸಭೆಯಲ್ಲಿ ಮಾತನಾಡಿದ ಸಚಿವರು, ಇಂದಿನ ಸಭೆಯಲ್ಲಿ ವ್ಯಕ್ತವಾಗಿರುವ ಸಲಹೆಗಳನ್ನು ಪರಿಗಣಿಸಿ ಜವಳಿ ನೀತಿಯಲ್ಲಿ ಅಳವಡಿಸಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು. ಜವಳಿ ಕ್ಷೇತ್ರದ ಅಭಿವೃದ್ಧಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ೨೦೨೦ರಿಂದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ಜವಳಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮಗಳ ಆಡಿಟ್ ಆಗಿರಲಿಲ್ಲ. ಈಗ ಆಡಿಟ್ ನಡೆದಿದ್ದು, ನಷ್ಟದ ಕಾರಣ ಎರಡನ್ನೂ ವಿಲೀನ ಮಾಡುವ ನಿರ್ಧಾರ ಕೈಗೊಳ್ಳಲಾಗಿದೆ. ಸರ್ಕಾರದ ಇಲಾಖೆಗಳಿಗೆ ಕೈಮಗ್ಗ ಉತ್ಪನ್ನಗಳನ್ನು ಖರೀದಿ ಮಾಡಲು ಈಗಾಗಲೇ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ. ಶಾಸಕರೊಂದಿಗೆ ಮತ್ತೊಮ್ಮೆ ಮುಖ್ಯಮಂತ್ರಿಗಳ ಬಳಿ ನಿಯೋಗ ತೆರಳುವ ಉದ್ದೇಶವಿದೆ. ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಕೈಮಗ್ಗ ಉತ್ಪನ್ನಗಳನ್ನು ಖರೀದಿ ಮಾಡಿದರೆ ಕೈಮಗ್ಗ ನೇಕಾರರಿಗೆ ಉತ್ತೇಜನ

ನೀಡಲು ಸಹಕಾರಿಯಾಗಲಿದೆ ಎಂದು ಅವರು ಹೇಳಿದರು. ಬೆಳಗಾವಿಯಲ್ಲಿ ಜವಳಿ ಸಂಶೋಧನಾ ಕೇಂದ್ರ ಆರಂಭಿಸಲಾಗುವುದು. ಚರ್ಮಹೊರತುಪಡಿಸಿ ತಯಾರಾಗುವ ಚಪ್ಪಲಿ ಮತ್ತು ಶೂ ಉದ್ಯಮದ ಅಭಿವೃದ್ಧಿ ಬಗ್ಗೆಯೂ ನೀತಿ ರೂಪಿಸಬೇಕು ಎಂಬ ಬೇಡಿಕೆ ವ್ಯಕ್ತವಾಗಿದ್ದು, ಸಣ್ಣ ಕೈಗಾರಿಕೆ ಕ್ಷೇತ್ರದ ಅಡಿಯಲ್ಲಿ ಬರುವ ಈ ಉದ್ಯಮವನ್ನು ಜವಳಿ ನೀತಿಯಲ್ಲಿ ಪರಿಗಣಿಸಲು ಪ್ರಯತ್ನ ಮಾಡಲಾಗುವುದು ಎಂದು ಸಚಿವರು ಹೇಳಿದರು.

><><><><><><

ಗುಡ್ಡಗಾಡು ಪ್ರದೇಶ ಮತ್ತು ಸೂಕ್ತ ರಸ್ತೆ ಸಂಪರ್ಕವಿಲ್ಲದ, ಬುಡಕಟ್ಟು ಸಮುದಾಯದ ಗ್ರಾಮದಲ್ಲಿನ ಗರ್ಭಿಣಿಯರಿಗೆ ಸುರಕ್ಷಿತ ಹೆರಿಗೆ ಮತ್ತು ಆರೋಗ್ಯಪೂರ್ಣ ಮಗುವಿನ ಜನನದ ನಿಟ್ಟಿನಲ್ಲಿ 'ಜನನಕ್ಕೆ ಕಾಯುವ ಮನೆ' ಸೌಲಭ್ಯವನ್ನು ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿಯಲ್ಲಿ ರಾಜ್ಯದ ಉತ್ತರಕನ್ನಡ ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಜಾರಿಗೆ ತರಲಾಗಿದೆ. ಉತ್ತರಕನ್ನಡ ಜಿಲ್ಲೆಯಲ್ಲಿ ಶೇಕಡ ಆಂಶ್ಕೂ ಅಧಿಕ ಭಾಗ ಅರಣ್ಯದಿಂದ ಕೂಡಿದ್ದು, ಇಲ್ಲಿನ ಹಲವಾರು ಗ್ರಾಮಗಳು ಅರಣ್ಯ ಭಾಗದಲ್ಲಿವೆ. ರಾತ್ರಿಯ ವೇಳೆ ಮತ್ತು ತುರ್ತು ಸಂದರ್ಭದಲ್ಲಿ ಚಿಕಿತ್ಸೆಗಾಗಿ ಸಕಾಲದಲ್ಲಿ ಆಸ್ಪತ್ರೆಗಳಿಗೆ ತಲುಪುವುದು ಕಷ್ಟ. ಆದ್ದರಿಂದ ಗರ್ಭಿಣಿಯರ ಸುರಕ್ಷತೆಗಾಗಿ ಈ ಯೋಜನೆ ಜಾರಿಗೆ ತರಲಾಗಿದೆ. ಜಿಲ್ಲೆಯ ಸಿದ್ದಾಪುರ, ಮುಂಡಗೋಡು, ಯಲ್ಲಾಪುರ ಹಾಗೂ ಜೊಯಿಡಾ ತಾಲೂಕು ಆಸ್ಪತ್ರೆಗಳಲ್ಲಿ ಇದನ್ನು ಜಾರಿಗೆ ತರಲಾಗಿದೆ. ಗುಡ್ಡಗಾಡು ಪ್ರದೇಶದ, ರಸ್ತೆ ಸಂಪರ್ಕ ಇಲ್ಲದ ಪ್ರದೇಶದ ೩೮ ವಾರಗಳು ಹಾಗೂ ಮೇಲ್ಪಟ್ಟ ಗರ್ಭಿಣಿಯರು ಈ ಕೇಂದ್ರಕ್ಕೆ ದಾಖಲಾಗಬಹುದು. ಈ ಕೇಂದ್ರದಲ್ಲಿ ಆಕೆಗೆ ಮತ್ತು ಆಕೆಯ ಒಬ್ಬರು ಸಹಾಯಕರಿಗೆ ಉಚಿತ ಊಟ ಉಪಹಾರದೊಂದಿಗೆ ಉತ್ತಮ ರೀತಿಯ ಚಿಕಿತ್ಸೆ ಮತ್ತು ಆರೈಕೆಯ ಮೂಲಕ ಸುರಕ್ಷಿತವಾಗಿ ಹೆರಿಗೆಯಾಗುವಂತೆ ನೋಡಿಕೊಳ್ಳಲಾಗುವುದು ಎಂದು ಆರ್.ಸಿ.ಎಚ್ ಅಧಿಕಾರಿ ಡಾ.ನಟರಾಜ್ ತಿಳಿಸಿದ್ದಾರೆ.

><><><><><><

೨೮ನೇ ಜಿಎಸ್‌ಟಿ ಕೌನ್ಸಿಲ್ ಸಭೆಯಲ್ಲಿ ಇದೇ ೨೭ ರಿಂದ ಜಾರಿಗೆ ಬರುವಂತೆ ಜಿಎಸ್‌ಟಿ ಕಡಿಮೆ ಮಾಡಿರುವ ಹಿನ್ನೆಲೆಯಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿರುವ ತೆರಿಗೆ ತಜ್ಞ ವಿಜಯ ರಾಜೇಶ್

ಜಿಎಸ್‌ಟಿ ಒಂದು ಅತ್ಯುತ್ತಮ ತೆರಿಗೆ ನಿಯಮ ಇದರ ಅನುಷ್ಠಾನದಿಂದ ಸರ್ಕಾರ, ಮಾರಾಟಗಾರರು ಹಾಗೂ ಗ್ರಾಹಕರಿಗೆ ಅನುಕೂಲ ಆಗುತ್ತದೆ. ವ್ಯಾಪಾರದ ವಿವರಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದರಿಂದ ತೆರಿಗೆ ಸೋರಿಕೆಯನ್ನು ತಡೆಗಟ್ಟಲು ಸಾಧ್ಯವಾಗುತ್ತದೆ. ಹೊಸಪೀಳಿಗೆಯ ತೆರಿಗೆ ವ್ಯವಸ್ಥೆ ವ್ಯಾಪಾರಸ್ಥರು ಹಾಗೂ ಗ್ರಾಹಕರನ್ನು ಜೊತೆಯಲ್ಲಿ ಕರೆದೊಯ್ಯುತ್ತದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

><><><><><><